# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2016-17ನೇ ಸಾಲಿನಲ್ಲಿ ಹೊಸದಾಗಿ 06 ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಶಾಲೆಗಳು, 10 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು 2 ಹೆಣ್ಣು ಮಕ್ಕಳ ಪದವಿ ಪೂರ್ವ ವಸತಿ ಕಾಲೇಜುಗಳನ್ನು ಹುದ್ದೆಗಳ ಸೃಜನೆಯೊಂದಿಗೆ ಪ್ರಾರಂಭಿಸಲು ಮಂಜೂರಾತಿ ನೀಡುವ ಕುರಿತು.

**ಓದಲಾಗಿದೆ:**-1. 2016-17ನೇ ಸಾಲಿನ ಆಯವ್ಯಯ ಭಾಷಣ.

2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ವಿನಿ/ವಶಾ/ಸಿಆರ್-199/2015-16 ದಿನಾಂಕ: 28.03.2016.

>>>()<<<

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ (1)ರಲ್ಲಿ 2016-17ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-207ರಲ್ಲಿ ಅಲ್ಪಸಂಖ್ಯಾತರ ಶೈಕ್ಷಣಿಕ ಹಿತದೃಷ್ಟಿಯಿಂದ ಹೊಸದಾಗಿ 06 ಮೊರಾರ್ಜಿದೇಸಾಯಿ ವಸತಿ ಶಾಲೆಗಳು, ಮತ್ತು 10 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು 02 ಹೆಣ್ಣು ಮಕ್ಕಳ ಪದವಿ ಪೂರ್ವ ವಸತಿ ಕಾಲೇಜುಗಳನ್ನು ಪ್ರಾರಂಭಿಸುವುದಾಗಿ ಘೋಷಿಸಿರುತ್ತಾರೆ.

ಈ ಯೋಜನೆಯು ಮುಂದುವರೆದ ಕಾರ್ಯಕ್ರಮವಾಗಿದ್ದು, ಮೇಲೆ ಘೋಷಿಸಿರುವ ಕಾರ್ಯಕ್ರಮಗಳನ್ನು ರಾಜ್ಯದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ, 6 ಮೊರಾರ್ಜಿದೇಸಾಯಿ ವಸತಿ ಶಾಲೆಗಳು, ಮತ್ತು 10 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು 2 ಹೆಣ್ಣು ಮಕ್ಕಳ ಪದವಿ ಪೂರ್ವ ವಸತಿ ಕಾಲೇಜುಗಳನ್ನು ಅಗತ್ಯ ಹುದ್ದೆಗಳನ್ನು ಸೃಜಿಸಿ ಪ್ರಾರಂಭಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಏಕಕಡತ ಪದ್ಧತಿಯಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 133 MDS 2016 ಬೆಂಗಳೂರು, ದಿನಾಂಕ:05-08-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ, ಈ ಕೆಳಕಂಡ ಸ್ಥಳಗಳಲ್ಲಿ 06 ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಶಾಲೆಗಳು, 10 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು 02 ಹೆಣ್ಣು ಮಕ್ಕಳ ಪದವಿ ಪೂರ್ವ ವಸತಿ ಕಾಲೇಜುಗಳನ್ನು ಅನುಬಂಧದಲ್ಲಿ ಸೂಚಿಸಿರುವ ಸಿಬ್ಬಂದಿಯೊಂದಿಗೆ ಸೃಜಿಸಿ, ಕೆಳಕಂಡ ಷರತ್ತುಗಳೊಂದಿಗೆ ಪ್ರಾರಂಭಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.